## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.1122/2024

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಸಾವಿತ್ರಮ್ಮ | CW: 5 | PW: 4 |
| ಗಂಡನ ಹೆಸರು | : | ನಾಗೇಂದ್ರಪ್ಪ | | |
| ವಯಸ್ಸು | : | 32 | | |
| ವೃತ್ತಿ | : | ಕೂಲಿ | | |
| ವಾಸಸ್ಥಳ | : | ಆರುಂಡಿ | | |

ದಿನಾಂಕಃ 28.03.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಆರೋಪಿಗಳು ಗೊತ್ತು. ಚಾಸಾ 1 ರಿಂದ 4 ಮತ್ತು 6 ರವರು ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನಾನು ಯಾವುದೇ ಗಲಾಟೆ ನೋಡಿಲ್ಲ. ಗಲಾಟೆ ಸಂಬಂಧ ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–

ದಿಃ 16.07.2024 ರಂದು ಸಂಜೆ 7 ಗಂಟೆ ಸಮಯದಲ್ಲಿ ಚಾಸಾ 2 ರವರ ಮನೆಯ ಹತ್ತಿರ ಗಲಾಟೆಯ ಶಬ್ದ ಕೇಳುತ್ತಿತ್ತು ಎಂದರೆ ಸರಿಯಲ್ಲ. ನಾನು ಚಾಸಾ 2 ರವರ ಮನೆಯ ಹತ್ತಿರ ಹೋದಾಗ ಆರೋಪಿಗಳೆಲ್ಲರೂ ಅಕ್ರಮ ಗುಂಪು ಕಟ್ಟಿಕೊಂಡು ಚಾಸಾ 1 ರಿಂದ 3 ರವರ ಮೇಲೆ ಅವಾಚ್ಯ ಶಬ್ದಗಳಿಂದ ಬೈದು, ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ಆರೋಪಿಗಳೆಲ್ಲರೂ ತಮ್ಮ ಕೈಗಳಿಂದ ಚಾಸ 2 ಮತ್ತು 3

ರವರಿಗೆ ಮೈಕೈಗೆ ಹೊಡೆದು ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ಜಗಳವನ್ನು ಬಿಡಿಸಲು ಹೋದ ಚಾಸಾ 1 ರವರ ಮೇಲೆ 1 ನೇ ಆರೋಪಿಯು ತನ್ನ ಕೈಗಳಿಂದ ಮೈಕೆಗೆ ಹೊಡೆದು ಕಾಲಿನಿಂದ ಹೊಡೆದು ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. 8 ನೇ ಆರೋಪಿಯು ಚಾಸಾ 2 ರವರ ತಲೆ ಕೂದಲು ಹಿಡಿದು ಎಳೆದಾಡಿ ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. 4 ನೇ ಆರೋಪಿಯು ಚಾಸಾ 3 ರವರ ಟಾಪ್ ಹಿಡಿದು ಎಳೆದಾಡಿ ಅವರ ಮನೆಯ ಜೋಕಾಲಿಗೆ ತಳ್ಳಿ ಗಾಯಗೊಳಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗಳೆಲ್ಲರೂ ಚಾಸಾ 1 ರಿಂದ 3 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. 3 ನೇ ಆರೋಪಿಯು ಚಾಸಾ 1 ರವರ ರೆಡ್ ಮೀ ಕಂಪನಿಯ ಸ್ಕ್ರೀನ್ ಟಚ್ ಮೊಬೈಲ್ ನ್ನು ಕಿತ್ತುಕೊಂಡು ನೆಲಕ್ಕೆ ಎಸೆದು ಹೊಡೆದು ಹಾಕಿ, ಚಾಸಾ 1 ರವರಿಗೆ ರೂ.4,000/- ಗಳಷ್ಟು ನಷ್ಟ ಉಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು, ಚಾಸಾ 4 ಮತ್ತು 6 ರವರು ಜಗಳ ಬಿಡಿಸಿರುತ್ತೇವೆ ಎದರೆ ಸರಿಯಲ್ಲ. ಹಲ್ಲೆಯಲ್ಲಿ ಗಾಯಗೊಂಡ ಚಾಸಾ 1 ರಿಂದ 3 ರವರನ್ನು ಚಾಸಾ 7 ರವರು ಹೊನ್ನಾಳಿ ಸಾರ್ವಜನಿಕ ಆಸ್ಪತ್ರೆಗೆ ಕರೆದುಕೊಂಡು ಹೋಗಿ ದಾಖಲಿಸಿದರು ಎಂದರೆ ಸರಿಯಲ್ಲ. ಈ ಪ್ರಕರಣದ ಸಂಬಂಧ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ 10 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ- ಆರೋಪಿಗಳ ಪರ ವಕೀಲರಿಂದಃ-

ಆರೋಪಿಗಳ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.